| | |
|---|---|
| | ಕರ್ನಾಟಕ ಲೋಕ ಸೇವಾ ಆಯೋಗ,<br>"ಉದ್ಯೋಗ ಸೌಧ", ಬೆಂಗಳೂರು-560001. |

ಸಂಖ್ಯೆ:ಪಿಎಸ್ ಸಿ 441 ಆರ್ ಟಿಬಿ (4)/2023-24/1626 ದಿನಾಂಕ:27-10-2023

## ಪ್ರಕಟಣೆ

ಆಯೋಗದ ವಿವಿಧ ಅಧಿಸೂಚನೆಗಳಲ್ಲಿ ಅಧಿಸೂಚಿಸಲಾದ ಗ್ರೂಪ್ 'ಸಿ' ಹುದ್ದೆಗಳಾದ ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಲೆಕ್ಕ ಸಹಾಯಕರು 242 (RPC) ಮತ್ತು ಕಿರಿಯ ಲೆಕ್ಕ ಸಹಾಯಕರು 67 (RPC), ಸಹಕಾರ ಇಲಾಖೆಯಲ್ಲಿನ ಸಹಕಾರ ಸಂಘಗಳ ನಿರೀಕ್ಷಕರ 47 (RPC) ಮತ್ತು ಸಹಕಾರ ಸಂಘಗಳ ನಿರೀಕ್ಷಕರ 53 (ಹೈ.ಕ), ಹುದ್ದೆಗಳಿಗೆ ದಿನಾಂಕ:04-11-2023ರಂದು ಕನ್ನಡ ಭಾಷಾ ಪರೀಕ್ಷೆಯನ್ನು ಹಾಗೂ ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಲೆಕ್ಕ ಸಹಾಯಕರು 242 (RPC), ಸಹಕಾರ ಇಲಾಖೆಯಲ್ಲಿನ ಸಹಕಾರ ಸಂಘಗಳ ನಿರೀಕ್ಷಕರ 47 (RPC) ಈ ಎರಡೂ ಹುದ್ದೆಗಳಿಗೆ ಒಂದೇ ಪಠ್ಯ ಕ್ರಮವಿರುವುದರಿಂದ ದಿನಾಂಕ:05-11-2023ರಂದು ಒಂದೇ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುತ್ತಿದೆ. ಈ ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಈ ಪರೀಕ್ಷೆಯ ಫಲಿತಾಂಶವನ್ನು ಎರಡು ಹುದ್ದೆಗಳಿಗೂ ಪರಿಗಣಿಸಲಾಗುವುದು. ಈ ಸಂಬಂಧ ರಾಜ್ಯದ ಆಯ್ದ ಜಿಲ್ಲಾ ಕೇಂದ್ರಗಳಲ್ಲಿ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ಅಭ್ಯರ್ಥಿಗಳು ಸದರಿ ಪರೀಕ್ಷೆಗಳ "ಪ್ರವೇಶ ಪತ್ರವನ್ನು" ಆಯೋಗದ ವೆಬ್ ಸೈಟ್ http://kpsc.kar.nic.in ರಲ್ಲಿ ದಿನಾಂಕ:26-10-2023 ರಿಂದ ಡೌನ್ ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಲು ತಾಂತ್ರಿಕ ಸಮಸ್ಯೆ ಎದುರಾದಲ್ಲಿ Help Line ಸಂಖ್ಯೆ:18005728707 ಅನ್ನು ಸಂಪರ್ಕಿಸಬಹುದು.

(ಕೆ.ಎಸ್.ಲತಾ ಕುಮಾರಿ)
ಕಾರ್ಯದರ್ಶಿ,
ಕರ್ನಾಟಕ ಲೋಕ ಸೇವಾ ಆಯೋಗ